**Bangalore**
**Regional News**
**06.05.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಪಂಚಖಾತ್ರಿ ಯೋಜನೆಗಳಿಂದ ಒಂದು ಕೋಟಿ ಕುಟುಂಬಗಳು ಬಡತನ ರೇಖೆಯಿಂದ ಮೇಲಕ್ಕೆ - ಸಚಿವ ಎಚ್.ಕೆ. ಪಾಟೀಲ್

೨. ರಾಜ್ಯದ ಎರಡು ಜಿಲ್ಲೆಗಳಲ್ಲೂ ನಾಳೆ ನಾಗರಿಕ ರಕ್ಷಣಾ ಅಣಕು ಕವಾಯತು ಆಯೋಜನೆ

೩. ಬೆಂಗಳೂರಿನಲ್ಲಿ ರಾಜ್ಯದಲ್ಲೇ ಮೊದಲ ಕೃತಕ ಹೃದಯ ಕಸಿ ಯಶಸ್ವಿ ಶಸ್ತ್ರಚಿಕಿತ್ಸೆ

೪. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ೨೭ನೇ ಘಟಿಕೋತ್ಸವದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಭಾಗಿ

<><*<><>*><>

ಪಂಚಖಾತ್ರಿ ಯೋಜನೆಗಳಿಂದ ಭ್ರಷ್ಟಾಚಾರ ರಹಿತವಾಗಿ ಒಂದು ಕೋಟಿ ಕುಟುಂಬಗಳನ್ನು ಬಡತನ ರೇಖೆಯಿಂದ ಮೇಲೆತ್ತಲಾಗಿದೆ ಎಂದು ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್ ಹೇಳಿದ್ದಾರೆ. ಗದಗದಲ್ಲಿಂದು ಕೆಡಿಪಿ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳನ್ನು ಅತ್ಯಂತ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗಿದೆ. ಗದಗ ಜಿಲ್ಲೆಯಲ್ಲಿ ಶೇಕಡ ೯೮.೨ರಷ್ಟು ಪ್ರಮಾಣ ಪಂಚ ಗ್ಯಾರಂಟಿ ಯೋಜನೆಗಳು ತಲುಪಿದೆ ಎಂದು ಮಾಹಿತಿ ನೀಡಿದರು.

<><*<><>*><>

ರಾಜ್ಯದ ಬೆಂಗಳೂರು, ರಾಯಚೂರು ಸೇರಿದಂತೆ ದೇಶದ ೨೪೪ ವರ್ಗೀಕರಿಸಲಾದ ನಾಗರಿಕ ರಕ್ಷಣಾ ಜಿಲ್ಲೆಗಳಲ್ಲಿ ನಾಗರಿಕ ರಕ್ಷಣಾ ಅಣಕು ಕವಾಯತು ನಡೆಸಲು ಗೃಹ ಸಚಿವಾಲಯ ನಿರ್ಧರಿಸಿದೆ. ಇದರ ಭಾಗವಾಗಿ ಆಯ್ದ ಪ್ರದೇಶಗಳಲ್ಲಿ ವಾಯುದಾಳಿ ಎಚ್ಚರಿಕೆ ಸೈರನ್‌ಗಳನ್ನು ಅಳವಡಿಸುವುದು, ವಿದ್ಯಾರ್ಥಿಗಳು ಮತ್ತು ನಾಗರಿಕರಿಗೆ ವೈಮಾನಿಕ ದಾಳಿ ಅಥವಾ ಬಾಂಬ್ ದಾಳಿಯಂತಹ ತುರ್ತು ಸಂದರ್ಭದಲ್ಲಿ ಹೇಗೆ ಪ್ರತಿಕ್ರಿಯಿಸಬೇಕೆಂಬುದರ ಕುರಿತು ಹೇಳಿಕೊಡುವುದು, ಶತ್ರು ದಾಳಿ ಸಂದರ್ಭದಲ್ಲಿ ಕಿಟಿಕಿಗಳಿಂದ ಮನೆ ಹೊರಗೆ ಬೆಳಕು ಹೋಗದಂತೆ

ಮುಚ್ಚುವುದು, ವಿದ್ಯುತ್ ಮುಖ್ಯ ಸ್ಥಾವರಗಳು, ಪ್ರಮುಖ ಸಾರಿಗೆ ವ್ಯವಸ್ಥೆಯನ್ನು ರಕ್ಷಿಸುವುದರ ಬಗ್ಗೆ ಕ್ರಮ ವಹಿಸುವುದು ಮತ್ತು ತುರ್ತು ಸಂದರ್ಭದಲ್ಲಿ ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ ಪಾರಾಗುವುದರ ಬಗ್ಗೆ ಸರ್ಕಾರ ಕೆಲವು ಸೂಚನೆಗಳನ್ನು ಹೊರಡಿಸಿದೆ. ಈ ಅಭ್ಯಾಸವನ್ನು ಗ್ರಾಮ ಮಟ್ಟದವರೆಗೆ ನಡೆಸಲು ಯೋಜಿಸಲಾಗಿದೆ. ವಾಯುದಾಳಿ ತಾಪಮಾನ ಏರಿಕೆ ವ್ಯವಸ್ಥೆಗಳ ಪರಿಣಾಮಕಾರಿತ್ವವನ್ನು ನಿರ್ಣಯಿಸುವುದು, ಭಾರತೀಯ ವಾಯುಪಡೆಯೊಂದಿಗೆ ಹಾಟ್‌ಲೈನ್ ಅಥವಾ ರೇಡಿಯೋ ಸಂವಹನಗಳ ಕಾರ್ಯಾಚರಣೆ ಮತ್ತು ನಿಯಂತ್ರಣ ಕೊಠಡಿಗಳ ಕಾರ್ಯವನ್ನು ಪರೀಕ್ಷಿಸುವುದು ಅಣಕು ಅಭ್ಯಾಸದ ಪ್ರಾಥಮಿಕ ಉದ್ದೇಶವಾಗಿದೆ.

<><*<><>*><>

ರಾಜ್ಯದಲ್ಲಿ ಆರೋಗ್ಯ ಸೇವೆಗಳನ್ನು ಉತ್ತಮ ದರ್ಜೆಗೇರಿಸಲು ಸರ್ಕಾರ ನಿರ್ಣಾಯಕ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಅಗತ್ಯವಿರುವ ಕಡೆ ಆಸ್ಪತ್ರೆಗಳ ನಿರ್ಮಾಣಕ್ಕೆ ಕ್ರಮ ವಹಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ಹಾಗೂ ಸೋಲೂರು ಸರ್ಕಾರಿ ಆಸ್ಪತ್ರೆಗಳಿಗೆ ಭೇಟಿ ನೀಡಿ ವ್ಯವಸ್ಥೆಗಳ ಬಗ್ಗೆ ಪರಿಶೀಲಿಸಿದ ನಂತರ ಮಾತನಾಡಿದ ಅವರು, ರಾಜ್ಯದ ಕಾಂಗ್ರೆಸ್ ಸರ್ಕಾರ ನೆಲಮಂಗಲದಲ್ಲಿ ೧೦೦ ಹಾಸಿಗೆಗಳ ತಾಲೂಕು ಆಸ್ಪತ್ರೆಗೆ ಮಂಜೂರಾತಿ ನೀಡಿದೆ. ಆಸ್ಪತ್ರೆಗಳ ಸ್ಥಿತಿಗತಿಗಳನ್ನು ಪರಿಶೀಲಿಸಲಾಗುತ್ತಿದೆ ಎಂದರು.

ಧ್ವನಿ : ದಿನೇಶ್ ಗುಂಡೂರಾವ್

<><*<><>*><>

ಕೋಲಾರದಲ್ಲಿಂದು ೨ನೇ ದಿನ ನಡೆಯುತ್ತಿರುವ ಪರಿಶಿಷ್ಟ ಸಮುದಾಯ ಜಾತಿ ಸಮೀಕ್ಷೆ ಸ್ಥಳಕ್ಕೆ ನ್ಯಾಯಮೂರ್ತಿ ಡಾ. ಎಚ್.ಎನ್. ನಾಗಮೋಹನ್ ದಾಸ್ ತಂಡ ಭೇಟಿ ನೀಡಿ, ಪರಿಶೀಲನೆ ನಡೆಸಿತು. ಕೋಲಾರದ ಅಂಬೇಡ್ಕರ್ ನಗರ, ಗಾಂಧೀನಗರ, ಟಮಕ, ಗದ್ದೆಕಣ್ಣೂರು ಪ್ರದೇಶಗಳಿಗೆ ತೆರಳಿ ಮನೆ ಮನೆಗೆ ಭೇಟಿ ನೀಡಿ, ಅಧಿಕಾರಿಗಳು ಮಾಹಿತಿ ಪಡೆದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ನ್ಯಾಯಮೂರ್ತಿ ಡಾ. ಎಚ್.ಎನ್. ನಾಗಮೋಹನ್ ದಾಸ್, ಪರಿಶಿಷ್ಟ ಸಮುದಾಯಗಳ ಸಮೀಕ್ಷೆಯಲ್ಲಿ ತಮ್ಮ ಜಾತಿಯ ಹೆಸರನ್ನು ಸ್ಪಷ್ಟವಾಗಿ ನಮೂದಿಸಬೇಕು. ಈ ಸಮೀಕ್ಷೆಯಿಂದ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕವಾಗಿ ಹಿಂದುಳಿದವರನ್ನು ಗುರುತಿಸಲು ಸಾಧ್ಯವಾಗಲಿದೆ ಎಂದರು.

ಧ್ವನಿ : ಡಾ. ಎಚ್.ಎನ್. ನಾಗಮೋಹನ್ ದಾಸ್

<><*<><>*><>

ಬೆಂಗಳೂರಿನ ಖಾಸಗಿ ಆಸ್ಪತ್ರೆಯೊಂದರಲ್ಲಿ ಇಬ್ಬರು ಉತ್ತರ ಕರ್ನಾಟಕದ ರೋಗಿಗಳಿಗೆ ಕೃತಕ ಹೃದಯ ಕಸಿಯನ್ನು ಯಶಸ್ವಿಯಾಗಿ ನೆರವೇರಿಸಲಾಗಿದ್ದು, ಇದು ರಾಜ್ಯದಲ್ಲೇ ಮೊದಲ ಯಶಸ್ವಿ ಪ್ರಯತ್ನವಾಗಿದೆ. ಈ ಕುರಿತು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಆರ್‌ಆರ್ ನಗರದ ಖಾಸಗಿ ಆಸ್ಪತ್ರೆಯ ಹಿರಿಯ ಹೃದಯ ಶಸ್ತ್ರಚಿಕಿತ್ಸಕ ಡಾ.ಅಶ್ವಿನ್, ಹೃದಯದ ಎಡ ಹೃತ್ಕರ್ಣದ ಹಾರ್ಟ್‌ಮೇಟ್ ೩ ಉಪಕರಣವನ್ನು ಮೆಗ್ಲೆವ್ ಫ್ಲೋ ತಂತ್ರಜ್ಞಾನ ಬಳಸಿಕೊಳ್ಳುವ ಮೂಲಕ ಉತ್ತರ ಕರ್ನಾಟಕ ಮೂಲದ ಗುರಪ್ಪ ಗೋಣಿ ಹಾಗೂ ಗುರುಲಿಂಗಪ್ಪ ಕಲ್ಯಾಣಶೆಟ್ಟಿ ಎಂಬ ಇಬ್ಬರು ಇಳಿವಯಸ್ಸಿನ ರೋಗಿಗಳಿಗೆ ಕೃತಕ ಹೃದಯ ಕಸಿ ನೆರವೇರಿಸಲಾಗಿದೆ. ಇದು ಅತ್ಯಂತ ಸಂಕೀರ್ಣ ಹಾಗೂ ಅಪರೂಪದ ಹೃದಯ ಕಸಿ ಶಸ್ತ್ರಚಿಕಿತ್ಸೆಯಾಗಿದೆ ಎಂದರು. ಈ ಇಬ್ಬರು ರೋಗಿಗಳ ಹೃದಯ ಸ್ನಾಯುಗಳು ಸಂಪೂರ್ಣವಾಗಿ ನಿರ್ಜೀವವಾಗಿದ್ದವು. ಹೀಗಾಗಿ ಅವರಿಗೆ ೩ನೇ ತಲೇಮಾರಿನ ಹಾರ್ಟ್‌ಮೇಟ್ ೩ ಎಲ್‌ವಿಎಡಿ ಎಡ ಹೃತ್ಕರ್ಣ ಸಹಾಯಕ  ಕೃತಕ ಹೃದಯ ಕಸಿಯನ್ನು ಯಶಸ್ವಿಯಾಗಿ ನೆರವೇರಿಸಲಾಯಿತು ಎಂದು ಮಾಹಿತಿ ನೀಡಿದರು.

<><*<><>*><>

ಎಲ್ಲರ ಆರೋಗ್ಯ ವೈದ್ಯಕೀಯ ಸೇವೆಗಳ ಮುಖ್ಯ ಉದ್ದೇಶವಾಗಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದ್ದಾರೆ.  ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ೨೬ನೇ ಘಟಿಕೋತ್ಸವದ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ವೈದ್ಯಕೀಯ ಸೇವೆಯನ್ನು ಮಾನವೀಯ ದೃಷ್ಠಿಯಿಂದ ಅಳವಡಿಸಿಕೊಂಡು ಪ್ರಾಮಾಣಿಕವಾಗಿ ಜನರಿಗೆ ವೈದ್ಯಕೀಯ ಸೌಲಭ್ಯ ಕಲ್ಪಿಸಬೇಕು. ಪ್ರಾಚೀನ ಭಾರತ ವೈದ್ಯಕೀಯ ವಿಜ್ಞಾನದ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತಿದೆ. ಮಹರ್ಷಿ ಚರಕನನ್ನು ಭಾರತದಲ್ಲಿ ಆಯುರ್ವೇದ ಮತ್ತು ಔಷಧದ ಪಿತಾಮಹ ಹಾಗೂ ಮಹರ್ಷಿ ಸುಶ್ರುತನನ್ನು ಶಸ್ತ್ರಚಿಕಿತ್ಸೆಯ ಪಿತಾಮಹ ಎಂದು ಪರಿಗಣಿಸಲಾಗುತ್ತದೆ. "ಪ್ರಸ್ತುತ ವೈದ್ಯಕೀಯ ಕ್ಷೇತ್ರದಲ್ಲಿ ತಂತ್ರಜ್ಞಾನವು ಅತ್ಯಂತ ವೇಗವಾಗಿ ಬದಲಾಗುತ್ತಿದೆ. ಯುವ ವೈದ್ಯರು ಹಳ್ಳಿಗಳತ್ತ ಮುಖ ಮಾಡುವ ಅವಶ್ಯಕತೆ ಇದೆ. ಹಳ್ಳಿಗಳಲ್ಲಿ ವಾಸಿಸುತ್ತಿರುವ ಜನರ ಸೇವೆ ಮಾಡಲು ಯುವ ವೈದ್ಯರು ಮುಂದಾಗಬೇಕು ಎಂದು ಕರೆ ನೀಡಿದರು. ಸಮಾರಂಭದಲ್ಲಿ ಸಚಿವರಾದ ಡಾ.ಶರಣ್ ಪ್ರಕಾಶ್ ಪಾಟೀಲ್, ವಿಪ್ರೋ ಲಿಮಿಟೆಡ್ ಸಂಸ್ಥಾಪಕ ಅಧ್ಯಕ್ಷ ಅಜೀಂ ಪ್ರೇಮ್‌ಜಿ, ಕುಲಪತಿ ಡಾ.ಭಗವಾನ್.ಬಿ.ಸಿ ಮತ್ತು ಇತರ ಗಣ್ಯರು ಉಪಸ್ಥಿತರಿದ್ದರು.

<><*<><>*><>

ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಸಂಬಂಧಿಸಿದಂತೆ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೈಗೊಳ್ಳುತ್ತಿರುವ ಎಲ್ಲಾ ಕ್ರಮಗಳನ್ನು ಬೆಂಬಲಿಸುವುದಾಗಿ ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಹಾಗೂ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ಘೋಷಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪೆಹಲ್ಗಾಮ್ ಘಟನೆ ಅಮಾನವೀಯ. ಈ ಹಿನ್ನೆಲೆಯಲ್ಲಿ ಪ್ರಧಾನಿಗಳು ಕೈಗೊಳ್ಳುವ ನಿರ್ಧಾರಕ್ಕೆ ಜೆಡಿಎಸ್ ಬದ್ಧವಾಗಿರುತ್ತದೆ. ರಕ್ಷಣಾ ಪಡೆಗಳಿಗೆ ಮುಕ್ತ ಸ್ವಾತಂತ್ರ್ಯ ನೀಡಲಾಗಿದೆ. ಗೃಹ, ರಕ್ಷಣೆ ಹಾಗೂ ವಿದೇಶಾಂಗ ಖಾತೆಗಳನ್ನು ನಿಭಾಯಿಸುತ್ತಿರುವ ಸಚಿವರು ಅತ್ಯಂತ ಜವಾಬ್ದಾರಿಯಿಂದ ಕೆಲಸ ಮಾಡುತ್ತಿದ್ದಾರೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

<><*<><>*><>

ನಗರದಲ್ಲಿ ನಾಗರಿಕರಿಗೆ ಸುರಕ್ಷಿತ ಮತ್ತು ನಡೆಯಲು ಯೋಗ್ಯವಾದ ಪಾದಚಾರಿ ಮಾರ್ಗಗಳನ್ನು ನಿರ್ಮಿಸಲು ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ನಾಗರಿಕರಿಗೆ ಸುಗಮ ಸಂಚಾರಕ್ಕೆ ಪಾದಚಾರಿ ಮಾರ್ಗಗಳನ್ನು ನಿರ್ಮಿಸುವ ಸಲುವಾಗಿ, ಪಶ್ಚಿಮ ವಲಯ ವ್ಯಾಪ್ತಿಯಲ್ಲಿ ಬರುವ ಕೆಂಪೇಗೌಡ ಬಸ್ ನಿಲ್ದಾಣದ ಬಳಿಯ ಗುಬ್ಬಿ ತೋಟದಪ್ಪ ರಸ್ತೆ, ಧನ್ವಂತರಿ ರಸ್ತೆ, ಟ್ಯಾಂಕ್ ಬಂಡ್ ರಸ್ತೆ ಹಾಗೂ ಬಸ್ ಘಟಕ ಪರಿವೀಕ್ಷಣೆ ನಡೆಸಿದ ವೇಳೆ ಅವರು ಮಾತನಾಡಿದರು. ಬೆಂಗಳೂರಿನಲ್ಲಿ ಪಾದಚಾರಿಗಳಿಗೆ ಮೊದಲ ಸ್ಥಾನ ನೀಡಿ, ಅವರಿಗೆ ಸುಗಮವಾಗಿ ಸಂಚರಿಸುವಂತಹ ಪಾದಚಾರಿ ಮಾರ್ಗಗಳನ್ನು ನಿರ್ಮಿಸಬೇಕು. ಜೊತೆಗೆ ಪಾದಚಾರಿ ಮಾರ್ಗಗಳನ್ನು ಕಾಲ-ಕಾಲಕ್ಕೆ ಸರಿಯಾಗಿ ನಿರ್ವಹಣೆ ಮಾಡಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

<><*<><>*><>

ವಿಜಯನಗರ ಜಿಲ್ಲಾ ಪಂಚಾಯಿತಿ, ಹೊಸಪೇಟೆ ಹಾಗೂ  ಬೈಲುವದ್ದಿಗೆರೆ ಗ್ರಾಮಪಂಚಾಯಿತಿ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ 'ದುಡಿಯೋಣ ಬಾ ಅಭಿಯಾನಕ್ಕೆ' ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಡಿ ಲಕ್ಷ್ಮಿಕಾಂತ್ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ನರೇಗಾ ಯೋಜನೆಯಡಿ ಗ್ರಾಮೀಣ ಭಾಗದ ಕೂಲಿಕಾರರ ಕುಟುಂಬಗಳಿಗೆ ವಾರ್ಷಿಕ ೧೦೦ ದಿನಗಳ ಕಾಲ ನಿರಂತರವಾಗಿ ಕೆಲಸ ಒದಗಿಸುವ ಮೂಲಕ ವಲಸೆ ಪ್ರವೃತ್ತಿಯನ್ನು ತಗ್ಗಿಸಬಹುದು.

ಮನ್ರೇಗಾ ಯೋಜನೆಯಡಿ ಒಳಗೊಳ್ಳದ ಕುಟುಂಬಗಳನ್ನು ಗುರುತಿಸಿ ಅಕುಶಲ ಕೆಲಸಕ್ಕಾಗಿ ನೋಂದಾಯಿಸುವುದು ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>